(ಊ) ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ.

(ಋ) ಗ್ರಾಮೀಣ ಪ್ರದೇಶದ ಯುವ ಕ್ರೀಡಾಪಟುಗಳಿಗೆ ತಲಾ ರೂ.1,000/–ದಂತೆ ಪ್ರೋತ್ಸಾಹಿತ ಕ್ರೀಡಾ ವಿಧ್ಯಾರ್ಥಿ ವೇತನವನ್ನು ನೀಡಲಾಗುತ್ತಿದೆ.

ಕೆರೆಗಳಿಗೆ ನೀರು ತುಂಬಿಸುವುದು

670(1158) ಶ್ರೀ ಬಂಡೆಪ್ಪ ಕಾಶೆಂಪೂರ್:(ಬೀದರ್ ದಕ್ಷಿಣ) ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ ಕಾರಂಜಾ ಜಲಾಶಯದಿಂದ ಬೀದರ್ ಜಿಲ್ಲೆಯಲ್ಲಿರುವ ದೊಡ್ಡ ದೊಡ್ಡ ಕೆರೆಗಳಿಗೆ ನೀರು ತುಂಬಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ ಮುಂದಿದ್ದಲ್ಲಿ, ಈ ಯೋಜನೆಗೆ ಸರ್ಕಾರ ಸರ್ವೆ ಕಾರ್ಯವನ್ನು ಪ್ರಾರಂಭಿಸಿದೆಯೇ;

ಇ ಪ್ರಾರಂಭಿಸಿದ್ದಲ್ಲಿ, ಈ ಯೋಜನೆಗಾಗಿ ಸರ್ಕಾರ ನಿಗಧಿಪಡಿಸಿರುವ ಅನುದಾನದ ಮೊತ್ತ ಎಷ್ಟು;

ಈ ಈ ಕೆರೆಗಳಿಗೆ ನೀರನ್ನು ಹರಿಸಲು ಕಾರಂಜಾ ಜಲಾಶಯದಿಂದ ಕಾಲುವೆಗಳನ್ನು ನಿರ್ಮಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ, ಹಾಗಿದ್ದಲ್ಲಿ, ಯಾವಾಗ ನಿರ್ಮಿಸಲಾಗುವುದು?

ಶ್ರೀ ಬಸವರಾಜ ಬೊಮ್ಮಾಯಿ(ಜಲಸಂಪನ್ಮೂಲ ಸಚಿವರು)

ಅ ಆ ಇ & ಈ) ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆ ಹಾಗೂ ಸಣ್ಣ ನೀರಾವರಿ ಇಲಾಖೆಯಡಿ ಇಂತಹ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಸಣ್ಣ ನೀರಾವರಿ ಕಾಮಗಾರಿಗಳು

671(1159) ಶ್ರೀ ಬಂಡೆಪ್ಪ ಕಾಶೆಂಪೂರ್:(ಬೀದರ್ ದಕ್ಷಿಣ) ಮಾನ್ಯ ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ ಕಳೆದ ಎರಡು ವರ್ಷಗಳಲ್ಲಿ ಬೀದರ್ ದಕ್ಷಿನ ವಿಧಾನ ಸಭಾಕ್ಷೇತ್ರದ ವ್ಯಾಪ್ತಿಯಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳಾವುವು (ವಿವರಗಳನ್ನು ನೀಡುವುದು);

ಆ ಈ ಕಾಮಗಾರಿಗಳಿಗಾಗಿ ಸರ್ಕಾರ ನಿಗದಿಪಡಿಸಿದ್ದ ಅನುದಾನದ ಮೊತ್ತವೆಷ್ಟು (ಕಾಮಗಾರಿಗಳವಾರು ಮಾಹಿತಿ ನೀಡುವುದು);

ಇ ಅವುಗಳಿಗೆ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ (ಕಾಮಗಾರಿವಾರು ಮಾಹಿತಿ ನೀಡುವುದು);

ಈ ಇದುವರೆವಿಗೂ ವೆಚ್ಚ ಮಾಡಿರುವ ಮೊತ್ತವೆಷ್ಟು (ಕಾಮಗಾರಿವಾರು ಮಾಹಿತಿ ನೀಡುವುದು)?

ಶ್ರೀ ಗೋವಿಂದ ಎಂ ಕಾರಜೋಳ(ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು)

ಅ ಆ ಇ & ಈ ವಿವರಗಳನ್ನು ಅನುಬಂಧದಲ್ಲಿ ಸಲ್ಲಿಸಲಾಗಿದೆ.